# ಕರ್ನಾಟಕ ಸರ್ಕಾರದ ನಡವಳಿಗಳು

| | |
|---|---|
| **ವಿಷಯ :-** | ಶಾಲಾ-ಕಾಲೇಜುಗಳಿಗೆ ದಾನಿಗಳ ಹೆಸರು ನಾಮಕರಣ ಮಾಡುವ ಬಗ್ಗೆ. |
| **ಓದಲಾಗಿದೆ :-** | 1) ಸರ್ಕಾರದ ಆದೇಶ ಸಂಖ್ಯೆ: ಇಡಿ 51 ಯೋಸಕ 89 ದಿನಾಂಕ: 11.09.1989.<br>2) ಸರ್ಕಾರದ ಪತ್ರ ಸಂಖ್ಯೆ: ಇಡಿ 98 ಯೋಸಕ 2010 ದಿನಾಂಕ: 12.07.2010. |

**ಪ್ರಸ್ತಾವನೆ:-**

1. ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮೇಲೆ ಓದಲಾದ **ಉಲ್ಲೇಖ** 1ರ ಸರ್ಕಾರದ ಆದೇಶದಲ್ಲಿ ಈ ಇಲಾಖೆಯಿಂದ ಪ್ರಸ್ತುತ ವಿಷಯದಲ್ಲಿ ಹಿಂದೆ ಹೊರಡಿಸಿದ್ದ ಎಲ್ಲಾ ಸರ್ಕಾರಿ ಆದೇಶಗಳನ್ನು ಪತ್ರಗಳನ್ನು ರದ್ದುಪಡಿಸಿ, ಎಲ್ಲಾ ಅಂಶಗಳನ್ನು ಪುನರ್ ಪರಿಶೀಲಿಸಿ, ಕರ್ನಾಟಕ ಸರ್ಕಾರದ ಎಲ್ಲಾ ಶಾಲಾ-ಕಾಲೇಜುಗಳಿಗೆ ಅನ್ವಯವಾಗುವಂತೆ ಸಾರ್ವಜನಿಕರಿಂದ ಶಾಲಾ ಕಾಲೇಜುಗಳಿಗೆ ಸೂಕ್ತ ನಿವೇಶನ, ಕಟ್ಟಡ ಮತ್ತು ಹಣವನ್ನು ದಾನರೂಪದಲ್ಲಿ ಸ್ವೀಕರಿಸಲಾಗುವುದು. ದಾನ ನೀಡುವ ವ್ಯಕ್ತಿ ಇಷ್ಟಪಟ್ಟ ಗಣ್ಯ ವ್ಯಕ್ತಿಯ ಹೆಸರನ್ನು ಸರ್ಕಾರಿ ಪ್ರಾಥಮಿಕ, ಪ್ರೌಢ ಮತ್ತು ಪದವಿ ಪೂರ್ವ ಕಾಲೇಜಿಗೆ ನಾಮಕರಣ ಮಾಡಲು ಸೂಕ್ತ ನಿವೇಶನ ಸೂಕ್ತ ಕಟ್ಟಡ ಮತ್ತು ಹಣವನ್ನು ಗೌರವಗಳೊಂದಿಗೆ ದಾನ ರೂಪದಲ್ಲಿ ಸ್ವೀಕರಿಸಲಾಗುವುದು. ವಿವಿಧ ಸರ್ಕಾರಿ ವಿದ್ಯಾ ಸಂಸ್ಥೆಗಳಿಗೆ ನಿಗದಿಪಡಿಸಿರುವ ದಾನ ರೂಪದ ನಿವೇಶನ ಕಟ್ಟಡ ಅಥವಾ ಹಣವನ್ನು ಪಡೆಯಲು ಈ ಕೆಳಕಂಡ ನಿಬಂಧನೆಗಳೊಂದಿಗೆ ದಾನ ಸ್ವೀಕರಿಸ ಲಾಗುವುದು ಎಂದು ಆದೇಶ ನೀಡಲಾಗಿತ್ತು.

| **ಸರ್ಕಾರಿ ವಿದ್ಯಾ ಸಂಸ್ಥೆಯ ವರ್ಗ** | **ನಿಗಧಿಪಡಿಸಿರುವ ದಾನರೂಪದ ಆಸ್ತಿ ಅಥವಾ ನಗದು** |
|---|---|
| ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ, ಆಧೀನಕ್ಕೆ ಒಳಪಡುವ ಎಲ್ಲಾ ಮಟ್ಟದ ಶಾಲಾ ಕಟ್ಟಡಗಳು. | ಕಾಲೇಜು; ಶಾಲಾ ಕಟ್ಟಡದ ಒಂದು ಅಥವಾ ಹೆಚ್ಚಿನ ಕೊಠಡಿಗಳನ್ನು ಒಳಾಂಗಣ-ಹಜಾರವನ್ನು ನಿರ್ಮಿಸಲು ತಗಲುವ ವೆಚ್ಚವನ್ನು ಭರಿಸಿದಲ್ಲಿ ದಾನಿಗಳು ಇಚ್ಚಿಸುವ ಹೆಸರನ್ನು ಆ-ಭಾಗಕ್ಕೆ ನಾಮಕರಣ ಮಾಡಲಾಗುವುದು. |

ಇತರೆ ಷರತ್ತುಗಳು

- ದಾನಿಗಳು ಇಷ್ಟ ಪಟ್ಟ ಹೆಸರನ್ನು ವಿದ್ಯಾ ಸಂಸ್ಥೆಗೆ ನಾಮಕರಣ ಮಾಡಲು ಕಟ್ಟಡದ ಒಟ್ಟು ಅಂದಾಜಿನ 1:3ನೇ ಭಾಗದಷ್ಟು ಅಥವಾ ಹೆಚ್ಚಿನ ಹಣ ನೀಡಿರಬೇಕು. ಇದಕ್ಕೆ ಸಂಬಂಧಿಸಿದಂತೆ ಕಟ್ಟಡ ಎಂದರೆ ಕಟ್ಟಡ ನಿರ್ಮಾಣಕ್ಕಾಗಿ ಶಾಲಾ ಕಾರ್ಯ ಚಟುವಟಿಕೆಗಳನ್ನು ನಿರ್ವಹಿಸಲು ಅನುಕೂಲವಾಗಿರುವ ಒಂದು ಪೂರ್ಣ ಹಂತವಾಗಿರುತ್ತದೆ. ಕೇವಲ ಒಂದು ಅಥವಾ ಎರಡು ಕೊಠಡಿಗಳಿಗೆ ಅನ್ವಯಿಸುವು ದಿಲ್ಲ.

- ಇದಕ್ಕಿಂತ ಕಡಿಮೆ ಮೊತ್ತದ ದಾನ ನೀಡಿದ ಪಕ್ಷದಲ್ಲಿ ಆ ಮೊತ್ತದಿಂದ ಕಟ್ಟಲ್ಪಟ್ಟ ಕೊಠಡಿ, ಒಳಾಂಗಣಾ ಅಥವಾ ಆ ವಿಭಾಗಕ್ಕೆ ಮಾತ್ರ ಸದರಿ ದಾನಿಗಳು ಇಚ್ಚೆಪಟ್ಟ ಹೆಸರನ್ನು ನಾಮಕರಣ ಮಾಡುವ ಅವಕಾಶವಿರುವುದು.

- ದಾನಿಗಳು ನೀಡುವ ದಾನ ಜಮೀನಿನ ರೂಪದಲ್ಲಿದ್ದು ಕ್ರೀಡಾಂಗಣಕ್ಕೆ ಉಪಯುಕ್ತವಾಗಿದ್ದರೆ, ಈ ಕ್ರೀಡಾಂಗಣಕ್ಕೆ ದಾನಿಗಳು ಸೂಚಿಸುವ ಹೆಸರನ್ನು ನಾಮಕರಣ ಮಾಡಲಾಗುವುದು.

- ಒಬ್ಬರು ಮತ್ತು ಹೆಚ್ಚಿನ ದಾನಿಗಳು ಒಂದೇ ವಿದ್ಯಾಸಂಸ್ಥೆಗೆ ದಾನ ನೀಡಿದಾಗ ಆ ವಿದ್ಯಾ ಸಂಸ್ಥೆಯ ಕಟ್ಟಡ ಅಥವಾ ಭೂಮಿಯನ್ನು ವಿಂಗಡಿಸಿ, ಪ್ರತಿಯೊಬ್ಬ ದಾನಿಗಳು ಸೂಚಿಸಿರುವ ಹೆಸರನ್ನಿಡಲು ಕ್ರಮ ಜರುಗಿಸಬೇಕು.

- ದಾನಿಗಳು ನೀಡುವ ದಾನ ಹಣದ ರೂಪದಲ್ಲಿದ್ದರೆ ಹಣ ಸ್ವೀಕರಿಸಿ ಸರ್ಕಾರಿ ಖಾತೆಗೆ ಜಮಾ ಮಾಡಿ ಕೊಂಡ ನಂತರ ಮೇಲ್ಕಂಡ ನಿಬಂಧನೆಗೆ ಒಳಪಟ್ಟು ದಾನಿಗಳು ಇಚ್ಚಿಸಿದ ಹೆಸರನ್ನು ವಿದ್ಯಾ ಸಂಸ್ಥೆಗೆ ನಾಮಕರಣ ಮಾಡಲು ಕ್ರಮ ಜರುಗಿಸಬೇಕು.

◆ ದಾನಿಗಳು ನೀಡುವ ದಾನ ಆಸ್ತಿ ರೂಪದಲ್ಲಿದ್ದರೆ, ದಾನ ಸ್ವೀಕರಿಸುವ ಹಕ್ಕು ಪತ್ರದ ದಾಖಲೆ, ನ್ಯಾಯಾ ಬದ್ಧವಾಗಿರುವುದನ್ನು ಪರಿಶೀಲಿಸಿ ಸದರಿ ಆಸ್ತಿಯನ್ನು ಶಾಲೆಗೆ ವರ್ಗಾಯಿಸಿಕೊಂಡ ಮೇಲೆ ತಿಳಿಸಿರುವ ನಿಬಂಧನೆಗಳನ್ನು ಪೂರೈಸಿದನಂತರ ವಿದ್ಯಾ ಸಂಸ್ಥೆಗೆ ದಾನಿಗಳು ಸೂಚಿಸಿದ ಹೆಸರನ್ನು ನಾಮಕರಣ ಮಾಡಲು ಕ್ರಮ ಜರುಗಿಸಬೇಕು.

◆ ಕಾಲೇಜು ಶಿಕ್ಷಣ ನಿರ್ದೇಶಕರು, ತಾಂತ್ರಿಕ ಶಿಕ್ಷಣ ನಿರ್ದೇಶಕರ ಮತ್ತು ಕರ್ನಾಟಕದ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಉಪ ನಿರ್ದೇಶಕರುಗಳ ಆಡಳಿತ ಪರಿಮಿತಿಯಲ್ಲಿರುವ ಸರ್ಕಾರಿ ವಿದ್ಯಾ ಸಂಸ್ಥೆಗಳಿಗೆ ದಾನಿಗಳು ಇಷ್ಟಪಟ್ಟ ಹೆಸರನ್ನು ವಿದ್ಯಾ ಸಂಸ್ಥೆಗೆ ನಾಮಕರಣ ಮಾಡಲು ಅಧಿಕಾರ ವಹಿಸಿಕೊಟ್ಟಿದೆ.

◆ ಸ್ವೀಕರಿಸುವ ದಾನ, ವಿದ್ಯಾ ಸಂಸ್ಥೆಗೆ ದಾನಿಗಳು ಸೂಚಿಸುವ ಹೆಸರನ್ನು ನಾಮಕರಣ ಮಾಡಲು ಮಾತ್ರ ಅನ್ವಯವಾಗುತ್ತದೆ. ಸ್ವೀಕರಸಿದ ದಾನವನ್ನು ಯಾವುದೇ ಕಾರಣಗಳಿಂದಾಗಿ ಹಿಂತಿರುಗಿಸಲಾಗುವುದಿಲ್ಲ.

◆ ದಾನಿಗಳಿಂದ • ಮೇಲಿನ ಕಾರ್ಯಕ್ಕೆ ಈಗಾಗಲೇ ದಾನ ಸ್ವೀಕರಸಿ, ಕೆಲಸ ಕಾರ್ಯಗಳು ಮುಂದುವರಿಯುತ್ತಿದ್ದಲ್ಲಿ ಈ ಹಿಂದೆ ಹೊರಡಿಸಿದ ಆದೇಶದ ಷರತ್ತುಗಳು ಅನ್ವಯವಾಗುತ್ತದೆ.

2. ಮೇಲೆ 2 ರಲ್ಲಿ ಓದಲಾದ ಪತ್ರದಲ್ಲಿ ತತ್ಕಾಲಿಕವಾಗಿ ಶಾಲೆಗಳಿಗೆ ದಾನಿಗಳ ಹೆಸರನ್ನು ನಾಮಕರಣ ಮಾಡುವುದನ್ನು ಸ್ಥಗಿತಗೊಳಿಸಲಾಗಿದೆ. ಈಗ ಹಲವಾರುದಾನಿಗಳಿಂದ ಶಾಲೆಗಳಿಗೆ ನಾಮಕರಣ ಮಾಡುವ ಪ್ರಸ್ತಾವನೆಗಳು ಬರುತ್ತಿದ್ದು ಸದರಿ ವಿಷಯದಲ್ಲಿ ಸರ್ಕಾರವು ವಿವರವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

**<u>ಸರ್ಕಾರದ ಆದೇಶ ಸಂಖ್ಯೆ : ಇಡಿ: 98 :ಯೋಸಕ 2010 ಬೆಂಗಳೂರು, ದಿನಾಂಕ: 01-02-2011</u>**

3. ಈ ಇಲಾಖೆಯಿಂದ ಪ್ರಸ್ತುತ ವಿಷಯದಲ್ಲಿ ಹಿಂದೆ ಹೊರಡಿಸಿದ್ದ ಎಲ್ಲಾ ಸರ್ಕಾರಿ ಆದೇಶಗಳನ್ನು ಪತ್ರಗಳನ್ನು ರದ್ದುಪಡಿಸಿ, ಎಲ್ಲಾ ಅಂಶಗಳನ್ನು ಪುನರ್ ಪರಿಶೀಲಿಸಿ, ಕರ್ನಾಟಕ ಸರ್ಕಾರದ ಎಲ್ಲಾ ಶಾಲೆಗಳಿಗೆ ಅನ್ವಯವಾಗುವಂತೆ ಸಾರ್ವಜನಿಕರಿಂದ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಸೂಕ್ತ ನಿವೇಶನ, ಕಟ್ಟಡ ಮತ್ತು ಹಣವನ್ನು ದಾನ ರೂಪದಲ್ಲಿ ಸ್ವೀಕರಿಸಲು ಹಾಗೂ ದಾನಿಗಳ ಹೆಸರನ್ನು ಇಡುವ ಬಗ್ಗೆ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರಿಗೂ, ಪದವಿ ಪೂರ್ವ ಕಾಲೇಜಿಗೆ ಸಂಬಂಧಿಸಿದಂತೆ ಸಾರ್ವಜನಿಕರಿಂದ ಸೂಕ್ತ ನಿವೇಶನ, ಕಟ್ಟಡ ಮತ್ತು ಹಣವನ್ನು ದಾನರೂಪದಲ್ಲಿ ಸ್ವೀಕರಿಸಲು ಹಾಗೂ ದಾನಿಗಳ ಹೆಸರನ್ನು ಇಡುವ ಬಗ್ಗೆ ನಿರ್ದೇಶಕರು/ ಆಯುಕ್ತರು, ಪದವಿ ಪೂರ್ವ ಶಿಕ್ಷಣ ಇಲಾಖೆ ಬೆಂಗಳೂರು ಇವರಿಗೂ ಈ ಕೆಳಕಂಡ ಷರತ್ತುಗಳನ್ನು ವಿಧಿಸಿ ಅನುಮತಿ ನೀಡಲಾಗಿದೆ.

<u>ಷರತ್ತುಗಳು</u>

◆ ದಾನಿಗಳು ಇಷ್ಟ ಪಟ್ಟ ಹೆಸರನ್ನು ವಿದ್ಯಾ ಸಂಸ್ಥೆಗೆ ನಾಮಕರಣ ಮಾಡಲು ಕಟ್ಟಡದ ಒಟ್ಟು ಅಂದಾಜಿನ 1:3ನೇ ಭಾಗದಷ್ಟು ಅಥವಾ ಹೆಚ್ಚಿನ ಹಣ ನೀಡಿರಬೇಕು. ಇದಕ್ಕೆ **ಸಂಬಂಧಿಸಿದಂತೆ ಕಟ್ಟಡ ಎಂದರೆ ಕಟ್ಟಡ ನಿರ್ಮಾಣಕ್ಕಾಗಿ ಶಾಲಾ ಕಾರ್ಯ ಚಟುವಟಿಕೆಗಳನ್ನು ನಿರ್ವಹಿಸಲು ಅನುಕೂಲವಾಗಿರುವ ಒಂದು ಪೂರ್ಣ ಹಂತವಾಗಿರುತ್ತದೆ. ಕೇವಲ ಒಂದು ಅಥವಾ ಎರಡು ಕೊಠಡಿಗಳಿಗೆ ಅನ್ವಯಿಸುವುದಿಲ್ಲ.**

◆ ಇದಕ್ಕಿಂತ ಕಡಿಮೆ ಮೊತ್ತದ ದಾನ ನೀಡಿದ ಪಕ್ಷದಲ್ಲಿ ಆ ಮೊತ್ತದಿಂದ ಕಟ್ಟಲ್ಪಟ್ಟ ಕೊಠಡಿ, ಒಳಾಂಗಣ ಅಥವಾ ಆ ವಿಭಾಗಕ್ಕೆ ಮಾತ್ರ ಸದರಿ ದಾನಿಗಳು ಇಚ್ಛೆಪಟ್ಟ ಹೆಸರನ್ನು ನಾಮಕರಣ ಮಾಡುವ ಅವಕಾಶವಿರುವುದು.

◆ ದಾನಿಗಳು ನೀಡುವ ದಾನ ಜಮೀನಿನ ರೂಪದಲ್ಲಿದ್ದು ಕ್ರೀಡಾಂಗಣಕ್ಕೆ ಉಪಯುಕ್ತವಾಗಿದ್ದರೆ, ಈ ಕ್ರೀಡಾಂಗಣಕ್ಕೆ ದಾನಿಗಳು ಸೂಚಿಸುವ ಹೆಸರನ್ನು ನಾಮಕರಣ ಮಾಡಲಾಗುವುದು.

- ಒಬ್ಬರು ಮತ್ತು ಹೆಚ್ಚಿನ ದಾನಿಗಳು ಒಂದೇ ವಿದ್ಯಾಸಂಸ್ಥೆಗೆ ದಾನ ನೀಡಿದಾಗ ಆ ವಿದ್ಯಾ ಸಂಸ್ಥೆಯ ಕಟ್ಟಡ ಅಥವಾ ಭೂಮಿಯನ್ನು ವಿಂಗಡಿಸಿ, ಪ್ರತಿಯೊಬ್ಬ ದಾನಿಗಳು ಸೂಚಿಸುವ ಹೆಸರನ್ನಿಡಲು ಕ್ರಮ ಜರುಗಿಸಬೇಕು.

- ದಾನಿಗಳು ನೀಡುವ ದಾನ ಹಣದ ರೂಪದಲ್ಲಿದ್ದರೆ ಹಣ ಸ್ವೀಕರಿಸಿ ಸರ್ಕಾರಿ ಖಾತೆಗೆ ಜಮಾ ಮಾಡಿಕೊಂಡ ನಂತರ ಮೇಲ್ಕಂಡ ನಿಬಂಧನೆಗೆ ಒಳಪಟ್ಟು ದಾನಿಗಳು ಇಚ್ಚಿಸಿದ ಹೆಸರನ್ನು ವಿದ್ಯಾ ಸಂಸ್ಥೆಗೆ ನಾಮಕರಣ ಮಾಡಲು ಕ್ರಮ ಜರುಗಿಸಬೇಕು.

- ದಾನಿಗಳು ನೀಡುವ ದಾನ ಆಸ್ತಿ ರೂಪದಲ್ಲಿದ್ದರೆ, ದಾನ ಸ್ವೀಕರಿಸುವ ಹಕ್ಕು ಪತ್ರದ ದಾಖಲೆ ಗಳು ನ್ಯಾಯ ಬದ್ಧವಾಗಿರುವುದನ್ನು ಪರಿಶೀಲಿಸಿ ಸದರಿ ಆಸ್ತಿಯನ್ನು ಕಾನೂನು ತೊಡಕುಗಳು ಬಾರದಂತೆ ಶಾಲೆಗೆ ವರ್ಗಾಯಿಸಿಕೊಂಡ ಮೇಲೆ ತಿಳಿಸಿರುವ ನಿಬಂಧನೆಗಳನ್ನು ಪೂರೈಸಿದನಂತರ ವಿದ್ಯಾ ಸಂಸ್ಥೆಗೆ ದಾನಿಗಳು ಸೂಚಿಸಿದ ಹೆಸರನ್ನು ನಾಮಕರಣ ಮಾಡಲು ಕ್ರಮ ಜರುಗಿಸಬೇಕು.

- ಸ್ವೀಕರಿಸುವ ದಾನ, ವಿದ್ಯಾ ಸಂಸ್ಥೆಗೆ ದಾನಿಗಳು ಸೂಚಿಸುವ ಹೆಸರನ್ನು ನಾಮಕರಣ ಮಾಡಲು ಮಾತ್ರ ಅನ್ವಯವಾಗುತ್ತದೆ. ಸ್ವೀಕರಿಸಿದ ದಾನವನ್ನು ಯಾವುದೇ ಕಾರಣಗಳಿಂದಾಗಿ ಹಿಂತಿರುಗಿಸ ಲಾಗುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಪಿ.ಎಫ್.ಮಾಗಿ)
ವಿಶೇಷಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ
ಶಿಕ್ಷಣ ಇಲಾಖೆ (ಯೋಜನೆ).

ಇವರಿಗೆ :

1. ಸಂಕಲನಕಾರರು, ಕರ್ನಾಟಕ ಗೆಜೆಟ್
2. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
3. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ
5. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗಾ
6. ನಿರ್ದೇಶಕರು, (ಪ್ರೌಢ ಶಿಕ್ಷಣ) ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
7. ನಿರ್ದೇಶಕರು, (ಪ್ರಾಥಮಿಕ ಪ್ರೌಢ ಶಿಕ್ಷಣ) ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
8. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು.
9. ಎಲ್ಲಾ ಜಿಲ್ಲಾ ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, [ಆಯುಕ್ತರ ಮೂಲಕ.]
10. ಎಲ್ಲಾ ಜಿಲ್ಲಾ ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ,[ನಿರ್ದೇಶಕರ ಮೂಲಕ]
11. ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಮೂಲ
12. ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು.
13. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ, ಬೆಂಗಳೂರು.
14. ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.